Karnataka People's Education Society's

**SIDDHARTH ARTS AND COMMERCE DEGREE COLLEGE BIDAR**

Ref. No. KPES/SACC/BDR/NSS/2025-26 Date : 23-01-2026

## ರಾಷ್ಟ್ರೀಯ ಮತದಾರರ ದಿನಾಚರಣೆ

ಇಂದು ದಿನಾಂಕ 23–01–2026 ರಂದು ಸಿದ್ದಾರ್ಥ ಕಲಾ ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯ ಬೀದರನಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಡಾ. ಬಿ.ಆರ್. ಅಂಬೇಡ್ಕರ ಪದವಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಚಂದ್ರಕಾಂತ ಸಿಕೇನಪುರೆಯವರು ಡಾ. ಬಿ.ಆರ್. ಅಂಬೇಡ್ಕರ ಅವರ ಪ್ರತಿಮೆಗೆ ಪೂಜೆ ಸಲ್ಲಿಸಿದರು. ನಂತರ ಮಾತನಾಡಿದ ಅವರು ಮತದಾನ ಪ್ರತಿಯೊಬ್ಬರ ಹಕ್ಕು, ಸಂವಿಧಾನಾತ್ಮಕವಾಗಿ ದೊರೆತ ಹಕ್ಕು ಆಗಿದೆ. ಎಲ್ಲರೂ ತಪ್ಪದೇ ಮತ ಚಲಾಯಿಸಬೇಕು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಇನ್ನೋರ್ವ ಅತಿಥಿಗಳಾಗಿ ಇತಿಹಾಸ ವಿಭಾಗದ ಪ್ರಾಧ್ಯಾಪಕರಾದ ಮಾಣಿಕ ಭಾಲ್ಕೆ ಮಾತನಾಡಿ ಸುಭಾಷ ಚಂದ್ರಭೋಸ ಜೀವನ ಸಾಧನೆ ವಿವರಿಸಿದರು. ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ಪ್ರಾಚಾರ್ಯರಾದ ಗೋಪಾಲ ಬಡಿಗೇರ್ ವಹಿಸಿದರು. ಕಾರ್ಯಕ್ರಮದ ಮೊದಲಿಗೆ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಬಸವರಾಜ ಸ್ವಾಮಿಯವರು ಸರ್ವರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್ ಎಸ್ ಎಸ್ ಸಂಯೋಜನಾಧಿಕಾರಿಗಳಾದ ರಾಜಕುಮಾರ ಸಿಂಧೆಯವರು ಪ್ರತಿಜ್ಞಾ ವಿಧಿ ಬೋಧಿಸಿದರು. ಕಾರ್ಯಕ್ರಮದ ಕೊನೆಗೆ ರಾಜಕುಮಾರ ಸಿಂಧೆಯವರು ಸರ್ವರನ್ನು ವಂದಿಸಿದರು. ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಳಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ಎಲ್ಲ ಬೋಧಕ ಬೋಧಕೇತರ ಸಿಬ್ಬಂದಿಗಳು, ಎನ್ ಎಸ್ ಎಸ್ ವಿದ್ಯಾರ್ಥಿಗಳು ಸೇರಿದಂತೆ ಬಿ.ಎ ಮತ್ತು ಬಿಕಾಂ ವಿದ್ಯಾರ್ಥಿಗಳು ಹಾಜರಿದ್ದರು.

ಎನ್.ಎಸ್.ಎಸ್. ಸಂಯೋಜನಾಧಿಕಾರಿಗಳು ಸಾಂಸ್ಕೃತಿಕ ವಿಭಾಗದ ಸಂಯೋಜಕರು ಪ್ರಾಚಾರ್ಯರು




ದಿನಾಂಕ 23-01-2026ರಂದು ನಡೆದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದ ಫೋಟೋಗಳು